# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1735 (2074)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ವಿಷಯ : ಸೂರತ್ಕಲ್-ಕುಂದಾಪುರ ರಾಷ್ಟ್ರೀಯ ಹೆದ್ದಾರಿ ಚತುಷ್ಪಥ ಕಾಮಗಾರಿಯ ಅವ್ಯವಸ್ಥೆಯ ಕುರಿತು

(ಅ) ಸೂರತ್ಕಲ್‌ನಿಂದ ಕುಂದಾಪುರ ರಾಷ್ಟ್ರೀಯ ಹೆದ್ದಾರಿ ಚತುಷ್ಪಥ ಕಾಮಗಾರಿಯನ್ನು ಪ್ರಾರಂಭಿಸಲಾಗಿದ್ದು ಯಾವಾಗ ; ಅಂದಾಜು ಮೊತ್ತವೆಷ್ಟು; ಈ ಯೋಜನೆಯಲ್ಲಿ ಪೂರ್ಣಗೊಳಿಸಿದ ಕಾಮಗಾರಿಗಳು ಯಾವುವು ; ಬಾಕಿಯಿರುವ ಕಾಮಗಾರಿಗಳು ಯಾವುವು ;

(ಆ) ಈ ಹೆದ್ದಾರಿಯಲ್ಲಿರುವ ಟೋಲ್ ಕೇಂದ್ರಗಳ ಸಂಖ್ಯೆ ಎಷ್ಟು ; ಈ ಟೋಲ್ ಕೇಂದ್ರಗಳಲ್ಲಿರುವ ಮೂಲ ಸೌಕರ್ಯಗಳು ಯಾವುವು; ಅವುಗಳಲ್ಲಿ ಸಿಬ್ಬಂದಿಗಳ ನಿಯಂತ್ರಣಕ್ಕಾಗಿ ಸರ್ಕಾರದ ಕ್ರಮವೇನು ;

(ಇ) ಉಡುಪಿ ಜಿಲ್ಲೆಯ ಬ್ರಹ್ಮಾವರ (ಆಕಾಶವಾಣಿ ಜಂಕ್ಷನ್ ಬಳಿ) ಬ್ರಹ್ಮಾವರ ಜನ್ನಾಡಿ ರಸ್ತೆಯ ಕೂಡುಭಾಗದಲ್ಲಿ ಅವೈಜ್ಞಾನಿಕ ಕಾಮಗಾರಿ ನಡೆದಿರುವುದರಿಂದ ಅಪಘಾತಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ?